## ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವಾಲಯ

## ಅಧಿಸೂಚನೆ

**ಸಂಖ್ಯೆ ಸಂವ್ಯಶಾಇ 33 ಶಾಸನ 2001, ಬೆಂಗಳೂರು, ದಿನಾಂಕ 25ನೇ ಆಗಸ್ಟ್, 2001**

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2001ಕ್ಕೆ 2001ರ ಆಗಸ್ಟ್ 24ನೇ ದಿನಾಂಕದಂದು ರಾಜ್ಯಪಾಲರ ಒಪ್ಪಿಗೆ ದೊರೆತಿದ್ದು, ಸಾಮಾನ್ಯ ತಿಳುವಳಿಕೆಗಾಗಿ ಇದನ್ನು 2001ರ ಕರ್ನಾಟಕ ಅಧಿನಿಯಮ ಸಂಖ್ಯೆ 21 ಎಂಬುದಾಗಿ ಕರ್ನಾಟಕ ರಾಜ್ಯಪತ್ರದಲ್ಲಿ ಪ್ರಕಟಿಸಬೇಕೆಂದು ಆದೇಶಿಸಲಾಗಿದೆ.

**2001ರ ಕರ್ನಾಟಕ ಅಧಿನಿಯಮ ಸಂಖ್ಯೆ 21**

2001ರ ಆಗಸ್ಟ್ ಇಪ್ಪತ್ತೈದನೇ ದಿನಾಂಕದಂದು ಕರ್ನಾಟಕ ರಾಜ್ಯಪತ್ರದ ವಿಶೇಷ ಸಂಚಿಕೆಯಲ್ಲಿ ಮೊದಲು ಪ್ರಕಟವಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ 2001.

(2001ರ ಆಗಸ್ಟ್ ಇಪ್ಪತ್ತನಾಲ್ಕನೇ ದಿನಾಂಕದಂದು ರಾಜ್ಯಪಾಲರ ಅನುಮತಿಯನ್ನು ಪಡೆಯಲಾಗಿದೆ)

ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು ತಿದ್ದುಪಡಿ ಮಾಡಲು ಒಂದು ಅಧಿನಿಯಮ.

ಇದರಲ್ಲಿ ಇನ್ನು ಮುಂದೆ ಕಂಡು ಬರುವ ಉದ್ದೇಶಗಳಿಗಾಗಿ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ನ್ನು (2000ದ ಕರ್ನಾಟಕ ಅಧಿನಿಯಮ 29) ತಿದ್ದುಪಡಿಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ ಮುಂದಿನಂತೆ ಅಧಿನಿಯಮಿತವಾಗಲಿ, ಎಂದರೆ:

1. **ಸಂಕ್ಷಿಪ್ತ ಹೆಸರು ಮತ್ತು ಪ್ರಾರಂಭ:** (1) ಈ ಅಧಿನಿಯಮವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ (ತಿದ್ದುಪಡಿ) ಅಧಿನಿಯಮ, 2001 ಎಂದು ಕರೆಯತಕ್ಕದ್ದು.

(2) ಇದು ಈ ಕೂಡಲೇ ಜಾರಿಗೆ ಬರತಕ್ಕದ್ದು

2. 4ನೇ ಪ್ರಕರಣದ ತಿದ್ದುಪಡಿ : ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999ರ (2000ದ ಕರ್ನಾಟಕ ಅಧಿನಿಯಮ 29) 4ನೇ ಪ್ರಕರಣದಲ್ಲಿ (ಇ) ಖಂಡಕ್ಕೆ ಈ ಮುಂದಿನದನ್ನು ಪ್ರತಿಯೋಜಿಸತಕ್ಕದ್ದು, ಎಂದರೆ,-

"(ಇ) ಸರ್ಕಾರದ ಇಲಾಖೆಗಳಿಂದ, ರಾಜ್ಯಸರ್ಕಾರದ ಉದ್ಯಮಗಳಿಂದ ಅಥವಾ ಯಾವುದೇ ಕಾನೂನಿನ ಮೂಲಕ ಅಥವಾ ಅದರ ಅಡಿಯಲ್ಲಿ ಸ್ಥಾಪಿತವಾದ ಮತ್ತು ಸರ್ಕಾರದ ಒಡೆತನ ಅಥವಾ ನಿಯಂತ್ರಣದಲ್ಲಿರುವ ಯಾವುದೇ ಮಂಡಲಿ, ನಿಕಾಯ ಅಥವಾ ನಿಗಮದಿಂದ ಅಥವಾ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಅಡಿಯಲ್ಲಿ ರಚಿತವಾದ ಜಿಲ್ಲಾ ಪಂಚಾಯತ್‌ಗಳು ಅಥವಾ ಪೌರನಿಗಮಗಳ ಅಧಿನಿಯಮ, 1976ರ ಅಡಿಯಲ್ಲಿ ರಚಿತವಾದ ಪೌರನಿಗಮಗಳು ಅಥವಾ ಕರ್ನಾಟಕ ಪೌರಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ರಚಿತವಾದ ಮುನ್ಸಿಪಲ್ ಕೌನ್ಸಿಲ್‌ಗಳು ಅಥವಾ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಲಿ ಅಧಿನಿಯಮ, 1993ರ ಅಡಿಯಲ್ಲಿ ರಚಿತವಾದ ಹೈದರಾಬಾದ್ ಪ್ರದೇಶಾಭಿವೃದ್ಧಿ ಮಂಡಲಿ; ಅಥವಾ ಮಲ್ನಾಡು ಅಭಿವೃದ್ಧಿ ಮಂಡಲಿ ಅಧಿನಿಯಮ, 1991ರ ಅಡಿಯಲ್ಲಿ ರಚಿತವಾದ ಮಲ್ನಾಡು ಅಭಿವೃದ್ಧಿ ಮಂಡಲಿ ಅಥವಾ ಬಯಲು ಸೀಮೆ ಅಭಿವೃದ್ಧಿ ಮಂಡಲಿಯ ಅಧಿನಿಯಮ, 1994ರ ಅಡಿಯಲ್ಲಿ ರಚಿತವಾದ ಬಯಲು ಸೀಮೆ ಅಭಿವೃದ್ಧಿ ಮಂಡಲಿಯಿಂದ,-

(i) ಯಾವುವುಗಳ ಮೌಲ್ಯವು ಐದು ಲಕ್ಷ ರೂಪಾಯಿಗಳನ್ನು ಮೀರಿರುವುದಿಲ್ಲವೋ ಆ ಎಲ್ಲಾ ಬಗೆಯ ನಿರ್ಮಾಣ ಕಾಮಗಾರಿಗಳ ಸಂದರ್ಭದಲ್ಲಿ;

(ii) ಯಾವುವುಗಳ ಮೌಲ್ಯವು ಒಂದು ಲಕ್ಷ ರೂಪಾಯಿಗಳನ್ನು ಮೀರಿರುವುದಿಲ್ಲವೋ ಆ ನಿರ್ಮಾಣ ಕಾಮಗಾರಿಗಳನ್ನು ಹೊರತುಪಡಿಸಿ ಸಂದರ್ಭದಲ್ಲಿ,-

- ಸಂಗ್ರಹಣೆ ಮಾಡಲಾಗಿದ್ದಲ್ಲಿ

(೪೪) ಸರಕುಗಳನ್ನು ಅಥವಾ ಸೇವೆಗಳನ್ನು, ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993ರ ಅಡಿಯಲ್ಲಿ ರಚಿತವಾದ ಗ್ರಾಮಪಂಚಾಯತಿಗಳು ಮತ್ತು ತಾಲ್ಲೂಕು ಪಂಚಾಯತಿಗಳು, ಕರ್ನಾಟಕ ಪೌರ ಸಭೆಗಳ ಅಧಿನಿಯಮ, 1964ರ ಅಡಿಯಲ್ಲಿ ರಚಿತವಾದ ಪಟ್ಟಣ ಪುರಸಭೆಗಳು ಅಥವಾ ಪಟ್ಟಣ ಪಂಚಾಯತಿಗಳು ಅಥವಾ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರ ಅಧಿನಿಯಮ, 1987ರ ಅಡಿಯಲ್ಲಿ ರಚಿತವಾದ ನಗರಾಭಿವೃದ್ಧಿ ಪ್ರಾಧಿಕಾರಗಳಿಂದ,

i) ಯಾವುವುಗಳ ಸಂಗ್ರಹಣೆಯ ಮೌಲ್ಯವು ಎರಡು ಲಕ್ಷ ರೂಪಾಯಿಗಳನ್ನು ಮೀರಿರುವುದಿಲ್ಲವೋ ಆ ಕಿರು ನೀರು ಸರಬರಾಜು ಯೋಜನೆಯ ಅನುಷ್ಠಾನದ ಅಥವಾ ಶಾಲಾಕೊಠಡಿಗಳ ನಿರ್ಮಾಣದ ಉದ್ದೇಶಕ್ಕಾಗಿ ಮತ್ತು

(ii) ಯಾವುವುಗಳ ಸಂಗ್ರಹಣೆಯ ಮೌಲ್ಯವು ಒಂದು ಲಕ್ಷ ರೂಪಾಯಿಗಳನ್ನು ಮೀರಿರುವುದಿಲ್ಲವೋ ಅಂಥ ಇತರೆ ಉದ್ದೇಶಗಳಿಗಾಗಿ,-

- ಸಂಗ್ರಹಣೆ ಮಾಡಲಾಗಿದ್ದಲ್ಲಿ."

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**ಮ.ರಾ. ಹೆಗಡೆ**
**ಸರ್ಕಾರದ ಕಾರ್ಯದರ್ಶಿ,**
**ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಇಲಾಖೆ.**